# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

# ಟಿ. ನರಸೀಪುರ.

# ಸಿ. ಸಿ ನಂ. 2011/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ದ

ಆರೋಪಿತರು : 1. ಸೇಹವಾಗ್ ಬಿನ್ ಜವರಯ್ಯ, 24 ವರ್ಷ,

2. ಸಚಿನ್ ಬಿನ್ ಜವರಯ್ಯ, 22 ವರ್ಷ,

3. ಶ್ರೀನಿವಾಸ ಮೂರ್ತಿ ಡಿ ಬಿನ್ ದಶರಥ, 25 ವರ್ಷ,

4. ರಂಗಸ್ವಾಮಿ ಬಿ ಬಿನ್ ಬಸವರಾಜು, 22 ವರ್ಷ,

ಎಲ್ಲರ ವಾಸಃ ವ್ಯಾಸರಾಜಪುರ ಗ್ರಾಮ,
ಸೋಸಲೆ ಹೋಬಳಿ, ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 07.06.2025 ರಂದು ಸಂಜೆ 5.45 ಗಂಟೆ ಸಮಯದಲ್ಲಿ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ವ್ಯಾಸರಾಜಪುರದ ಮುಖ್ಯ ರಸ್ತೆಯಲಿ ಇರುವ ಮಸೀದಿ ಹತ್ತಿರ ಡಾಂಬರು ರಸ್ತೆಯ ಪೂರ್ವದ ಅಂಚಿನಲ್ಲಿ ಚಾಸಾ-1 ರವರು ನಿಂತಿದ್ದಾಗ ಅಲ್ಲಿ ಒಂದು ಕಾರು ರಸ್ತೆಯಲ್ಲಿ ಸಾರ್ವಜನಿಕರು ಓಡಾಡಲು ತೊಂದರೆ ಆಗುವಂತೆ ನಿಂತಿದ್ದು ಚಾಸಾ-1 ಮಹೇಶ ಸಿ ರವರು ಕಾರಿನಲ್ಲಿ ಕುಳಿತಿದ್ದವರಿಗೆ ಕಾರನ್ನು ತೆಗೆಯಿರಿ ಎಂದು ಹೇಳುತ್ತಿದ್ದಾಗ ಆರೋಪಿತರಾದ ನೀವು ಸಾಮಾನ ಉದ್ದೇಶ ಹೊಂದಿ ನಿಮ್ಮ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಅಡ್ಡಗಟ್ಟಿ ಕುತ್ತಿಗೆ ಪಟ್ಟಿಯನ್ನು ಹಿಡಿದು ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ

ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.126(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ರಿಂದ 4 ನೇ ಆರೋಪಿತರಾದ ನೀವು ಚಾಸಾ-1 ರವರನ್ನು ಮತ್ತು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.352 ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 1 ನೇ ಆರೋಪಿರವರು ಅಲ್ಲೆ ಬಿದ್ದಿದ್ದ ದೊಣ್ಣೆಯಿಂದ ಚಾಸಾ-1 ರವರ ಎಡಕೈಗೆ, ಬಲ ಕಿವಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.118(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ರಿಂದ 4 ನೇ ಆರೋಪಿತರು ಕೈಯಿಂದ ಚಾಸಾ-1 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.115(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರೊಂದಿಗೆ ಜಗಳ ತೆಗೆದು ಚಾಸಾ-1 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ

ಕಲಂ.351(2), 351(3) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **17.03.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

## **ಆರೋಪಿತರ ಸಹಿ**

1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ